# ವ್ಯಸನ ದುಷ್ಪರಿಣಾಮಗಳ ಬಗ್ಗೆ ಯುವಜನತೆಗೆ ಅರಿವು ಅಗತ್ಯ : ಎಸ್ಪಿ

# ಮಾದಕ ವಸ್ತು ಜಾಗೃತಿ ಕುರಿತು ವಾಕಥಾನ್ ಇಂದು




## ಓಟದಲ್ಲಿ ಸಿನಿಮಾ ತಾರೆಯರು ಭಾಗಿ

ಅಲಯನ್ಸ್ ಕಾಲೇಜಿನಿಂದ ಪ್ರಾರಂಭವಾಗುವ ಓಟ ಆನೇಕಲ್ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಾಗಿ ಮತ್ತೆ ಅಲಯನ್ಸ್ ಕಾಲೇಜಿಗೆ ವಾಪಸ್ ಆಗಲಿದ್ದು, ಬೆಳಗ್ಗೆ 9ಕ್ಕೆ ವೇದಿಕೆ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ, ಮಾದಕ ವಸ್ತುಗಳ ಬಳಕೆಯಿಂದ ಆಗುತ್ತಿರುವ ತೊಂದರೆ ಕುರಿತು ಜಾಗೃತಿ ಮೂಡಿಸುವ ಅಭಿಯಾನ ಇದಾಗಿದೆ. ಇನ್ನೂ ವಾಕಥಾನ್‌ಗೆ ಕೇಂದ್ರ ವಲಯ ಐಜಿಪಿ ರವಿಕಾಂತೇಗೌಡ ಅವರು ಚಾಲನೆ ನೀಡಲಿದ್ದು, ಪ್ರಮುಖ ಸಿನಿಮಾ ತಾರೆಯರು ಹಾಗೂ ಕ್ರೀಡಾಪಟುಗಳು ಓಟದಲ್ಲಿ ಭಾಗವಹಿಸಲಿದ್ದಾರೆ ಎಂದು ಎಸ್ಪಿ ಮಲ್ಲಿಕಾರ್ಜುನ್ ಬಾಲದಂಡಿ ತಿಳಿಸಿದರು.

**ನೇಕಲ್:** ಮಾದಕ ವಸ್ತುಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ, ಇನ್ನು ಇದರಿಂದಾಗುವ ದುಷ್ಪರಿಣಾಮಗಳ ಬಗ್ಗೆ ಇಂದಿನ ಯುವ ಜನತೆಗೆ ಹೆಚ್ಚು ಅರಿವು ಮೂಡಿಸಬೇಕಿದೆ ಎಂದು ಬೆಂ.ಗ್ರಾ. ಜಿಲ್ಲೆ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ್ ಬಾಲದಂಡಿ ತಿಳಿಸಿದರು.

ಆನೇಕಲ್ ಪಟ್ಟಣದ ಅಲಯನ್ಸ್ ಕಾಲೇಜಿನಲ್ಲಿ ಆಯೋಜಿಸಿದ್ದ ಪೂರ್ವಭಾವಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಂಗಳೂರು ನಗರ ಜಿಲ್ಲಾ ಪೊಲೀಸ್ ವತಿಯಿಂದ ಮಾದಕ ವಸ್ತು ಬಳಕೆ ವಿರೋಧಿಸಿ ಭಾನುವಾರ (ಜ.7)ರಂದು ಬೆಳಗ್ಗೆ 7 ಗಂಟೆಗೆ 5 ಕಿಲೋಮೀಟರ್ ಹಾಗೂ 100 ಕಿಲೋಮೀಟರ್ ವಾಕಥಾನ್ ಆಯೋಜನೆ ಮಾಡಲಾಗಿದೆ, ಅಲಯನ್ಸ್ ಕಾಲೇಜಿನಲ್ಲಿ ಬೆಳಗ್ಗೆ 7 ಗಂಟೆಗೆ ವಾಕಥಾನ್ ಆರಂಭವಾಗಲಿದ್ದು, ಭಾಗವಹಿಸುವವರಿಗೆ 6ಗಂಟೆ 45 ನಿಮಿಷದವರೆಗೆ ನೋಂದಣಿ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ.

ಕಾಲೇಜು ವಿದ್ಯಾರ್ಥಿಗಳು ಇತ್ತೀಚಿಗೆ ಮಾದಕ ವಸ್ತುಗಳಿಗೆ ಬಲಿಯಾಗುತ್ತಿದ್ದಾರೆ, ಪ್ರಾರಂಭಿಕ ಹಂತದಲ್ಲೇ ಇದಕ್ಕೆ ಕಡಿವಾಣ ಹಾಕಬೇಕು ಎನ್ನುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ನಿರಂತರವಾಗಿ ಕೆಲಸ ಮಾಡುತ್ತಿದೆ. ಕಳೆದ 2023ರಲ್ಲಿ ಬೆಂಗಳೂರು ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಮಾದಕ ವಸ್ತುಗೆ ಸಂಬಂಧಿಸಿದ 250 ಪ್ರಕರಣಗಳು ದಾಖಲಾಗಿದ್ದು, 150 ಜನರ ಮೇಲೆ ಪ್ರಕರಣ ದಾಖಲಾಗಿದೆ, ಒಟ್ಟು ಬಂಧಿತರಿಂದ 750 ಕೆಜಿ ಗಾಂಜಾ ವಶಕ್ಕೆ ಪಡೆಯಲಾಗಿದೆ, ವಿದ್ಯಾರ್ಥಿಗಳಿಗೆ ಯಾರು ಇದನ್ನು ಸರಬರಾಜು ಮಾಡುತ್ತಾರೆ, ಎಲ್ಲಿಂದ ತರುತ್ತಾರೆ ಎನ್ನುವ ಮಾಹಿತಿಯನ್ನು ಕೂಡ ಕಲೆಹಾಕಿ ಅಂತಹವರನ್ನು ಜೈಲಿಗೆ ಕಳುಹಿಸುವ ಕೆಲಸ ಪೊಲೀಸ್ ಇಲಾಖೆ ಮಾಡುತ್ತಿದ್ದು, ವಿದ್ಯಾರ್ಥಿಗಳು ವ್ಯಸನಮುಕ್ತರಾಗುವ ನಿಟ್ಟಿನಲ್ಲಿ ಜಾಗೃತರಾಗಬೇಕು ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಹೆಚ್ಚುವರಿ ಎಸ್ಪಿ ಎಂ.ಎಲ್ .ಪುರುಷೋತ್ತಮ್, ಡಿವೈಎಸ್ಪಿ ಮೋಹನ್, ಪೊಲೀಸ್ ಇನ್‌ಸ್ಪೆಕ್ಟರ್ ಚಂದ್ರಪ್ಪ, ಐಯನ್ ರೆಡ್ಡಿ, ನವೀನ್, ರಾಘವ್ ಗೌಡ, ಸಂಜೀವ್ ಮಹಾಜನ್ ಅಲಿಯನ್ಸ್ ಕಾಲೇಜಿನ ಆಡಳಿತ ಮಂಡಳಿಯ ಸುರೇಖಾ ಶೆಟ್ಟಿ ಮತ್ತಿತರರು ಹಾಜರಿದ್ದರು.